ಕರ್ನಾಟಕ ಸರ್ಕಾರ

ಕರ್ನಾಟಕ ಪರೀಕ್ಷಾ ಪ್ರಾಧಿಕಾರ

**ಸಿಇಟಿ-2017 – ಆಯುಷ್ / ಬಿ.ಎಸ್‌ಸಿ (ಕೃಷಿ) / ವೆಟರಿನರಿ (ಫಾರ್ಮ್ ಸೈನ್ಸ್) – ಸೀಟು ಹಂಚಿಕೆ ಸೂಚನೆಗಳು**

ಆಯ್ಕೆ ದಾಖಲಿಸುವ ವೇಳಾಪಟ್ಟಿ

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.18/2016-17 ದಿನಾಂಕ: 13-09-2017

ಈ ಸುತ್ತಿನಲ್ಲಿ, ರದ್ದುಪಡಿಸಿಕೊಂಡಿರುವ / ಹೊಸದಾಗಿ ಸೇರ್ಪಡೆಯಾದ / ಕಾಲೇಜಿಗೆ ಪ್ರವೇಶ ಪಡೆಯದೆ ಇರುವ (if any) ಆಯುಷ್, ಕೃಷಿ ವಿಜ್ಞಾನ, ವೆಟರಿನರಿ (ಫಾರ್ಮ್ ಸೈನ್ಸ್) ಸೀಟುಗಳನ್ನು, 2017ನೇ ಸಾಲಿನಲ್ಲಿ ರ್‍ಯಾಂಕ್ ಪಡೆದಿರುವ ಅಭ್ಯರ್ಥಿಗಳಿಗೆ ಈ ಸುತ್ತಿನಲ್ಲಿ ವೇಳಾಪಟ್ಟಿಯಂತೆ ಆಯ್ಕೆಗೆ ಅವಕಾಶ ಕಲ್ಪಿಸಲಾಗುವುದು. ಕಾಲೇಜುವಾರು, ಕೋರ್ಸುವಾರು ಮತ್ತು ಕ್ಯಾಟಗರಿವಾರು ವಿವರಗಳುಳ್ಳ ಸೀಟ್ ಮ್ಯಾಟ್ರಿಕ್ಸ್ ಅನ್ನು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ಶುಲ್ಕದ ವಿವರಗಳೊಂದಿಗೆ ಪ್ರಕಟಿಸಲಾಗಿದೆ. ಈ ಮೇಲೆ ತಿಳಿಸಿರುವ ಸೀಟುಗಳ ಜೊತೆಯಲ್ಲಿ ಸೀಟು ಹಂಚಿಕೆಯ ಸಂದರ್ಭ ದಲ್ಲಿ ಆಗಿಂದಾಗ್ಗೆ ಉದ್ಭವಿಸುವ ಆಯುಷ್, ಕೃಷಿ ವಿಜ್ಞಾನ ಮತ್ತು ವೆಟರಿನರಿ ಸೀಟುಗಳನ್ನೂ ಸಹ ಹಂಚಿಕೆ ಮಾಡಲಾಗುವುದು. ಇಚ್ಛೆಯುಳ್ಳ ಅರ್ಹ ಅಭ್ಯರ್ಥಿಗಳು ಈ ಕೆಳಗಿನ ವೇಳಾಪಟ್ಟಿಯಂತೆ ಹೊಸದಾಗಿ ಇಚ್ಛೆ / ಆಯ್ಕೆಯನ್ನು ದಾಖಲಿಸಿ ಈ ಸುತ್ತಿನಲ್ಲಿ ಭಾಗವಹಿಸಬಹುದಾಗಿದೆ.

| Sl. No. | Particulars | Date and Time |
|---|---|---|
| 01 | Display of Seat Matrix | 13-09-2017 after 6.00 pm |
| 02 | Option Entry by Eligible Candidates | From 8.00 pm on 13-09-2017 to 18-09-2017 up to 11.00 am |
| 03 | Publication of Seat Allotment Results | 18-09-2017 after 6.00 pm |
| 04 | Confirmation of Allotment, Payment of Fees and Downloading of Admission Order | 20-09-2017 to 22-09-2017 |
| 05 | Last date for reporting to college | 22-09-2017 before 5.30 pm |

**ಸೂಚನೆ:**

1. ಈ ಸುತ್ತಿನಲ್ಲಿ ಅಭ್ಯರ್ಥಿಗಳು ಆಯುಷ್ / ಫಾರ್ಮ್ ಕೋರ್ಸುಗಳಿಗೆ ಹೊಸದಾಗಿ ಇಚ್ಛೆ / ಆಯ್ಕೆ ಅನ್ನು ದಾಖಲಿಸಬೇಕು. ಈ ಮೊದಲು ದಾಖಲಿಸಿದ್ದ ಆಪ್ಷನ್ ಗಳನ್ನು ಪರಿಗಣಿಸಲಾಗುವುದಿಲ್ಲ.
2. ಸೀಟ್ ಮ್ಯಾಟ್ರಿಕ್ಸ್‌ನಲ್ಲಿ ಸೀಟುಗಳ ಲಭ್ಯತೆ ಇಲ್ಲದಿದ್ದರೂ ಸಹ ಅಭ್ಯರ್ಥಿಗಳು ಆದ್ಯತೆಗಳನ್ನು ಸೇರಿಸಬಹುದು ಯಾಕೆಂದರೆ ಸೀಟು ಹಂಚಿಕೆಯ ಕಾರ್ಯದಲ್ಲಿ ಉದ್ಭವಿಸುವ ಆಯುಷ್ / ಕೃಷಿ ವಿಜ್ಞಾನ / ವೆಟರಿನರಿ ಕೋರ್ಸುಗಳ ಸೀಟುಗಳನ್ನೂ ಸಹ ಹಂಚಿಕೆ ಮಾಡಲಾಗುವುದು.
3. ಈಗಾಗಲೇ ಕಾಲೇಜುಗಳಲ್ಲಿ ಪ್ರವೇಶ ಪಡೆದಿರುವ ಅಭ್ಯರ್ಥಿಗಳು, ಈ ಮೇಲ್ಕಂಡ ಕೋರ್ಸುಗಳಿಗೆ ಆಸಕ್ತಿ ಇದ್ದರೆ ಮಾತ್ರ ಮತ್ತು ನಿಗದಿತ ದಿನಾಂಕದೊಳಗೆ ಮೂಲ ದಾಖಲಾತಿಗಳನ್ನು ತಾವು ಅಭ್ಯಸಿಸುತ್ತಿರುವ ಕಾಲೇಜುಗಳಿಂದ ಪಡೆಯುವುದನ್ನು ಖಾತ್ರಿಪಡಿಸಿಕೊಂಡು ಈ ಸುತ್ತಿನಲ್ಲಿ ಭಾಗವಹಿಸಲು ಸೂಚಿಸಿದೆ. ಈ ಸುತ್ತಿನಲ್ಲಿ ಸೀಟು ಹಂಚಿಕೆಯಾದ ತಕ್ಷಣ ಹಿಂದಿನ ಸುತ್ತುಗಳಲ್ಲಿ ಹಂಚಿಕೆಯಾಗಿದ್ದ ಸೀಟು ತನ್ನಷ್ಟಕ್ಕೆ ರದ್ದುಗೊಳ್ಳುತ್ತದೆ ಮತ್ತು ಯಾವುದೇ ಕಾರಣಕ್ಕೂ ಆ ಸೀಟುಗಳನ್ನು ಹಿಂಪಡೆಯಲು ಸಾಧ್ಯವಾಗುವುದಿಲ್ಲ ಹಾಗೂ ಈ ಸುತ್ತಿನಲ್ಲಿ ಹಂಚಿಕೆಯಾಗುವ ಕಾಲೇಜಿಗೆ ಕಡ್ಡಾಯವಾಗಿ ಪ್ರವೇಶವನ್ನು ಪಡೆಯಬೇಕು.
4. ಆದರೆ ಪ್ರವೇಶ ಪಡೆದಿರುವ ಕಾಲೇಜುಗಳಿಂದ ಮೂಲ ದಾಖಲೆಗಳನ್ನು ಪಡೆದು ಹೊಸದಾಗಿ ಹಂಚಿಕೆಯಾಗುವ ಕಾಲೇಜುಗಳಿಗೆ ನಿಗದಿತ ಸಮಯದಲ್ಲಿ ನೀಡಿ ಪ್ರವೇಶ ಪಡೆಯುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.
5. ಸಿಇಟಿ-2017 ರ ಬ್ರೋಚರನಲ್ಲಿ ನೀಡಿರುವ ಇತರೆ ಮಾರ್ಗದರ್ಶನಗಳು ಮತ್ತು ಕಾರ್ಯವಿಧಾನಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

**ವಿಶೇಷ ಸೂಚನೆ:** ಈಗಾಗಲೆ ಸೀಟನ್ನು ಪಡೆದು ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಅಭ್ಯರ್ಥಿಗಳು ಈ ಸುತ್ತಿನಲ್ಲಿ ಭಾಗವಹಿಸುವ ಮೊದಲು ಪೋಷಕರೊಡನೆ ಚರ್ಚಿಸಿ ಯೋಚಿಸಿ **ಆಯುಷ್** / **ಕೃಷಿ ವಿಜ್ಞಾನ** / **ವೆಟರಿನರಿ** ಕೋರ್ಸುಗಳಲ್ಲಿ ಇಷ್ಟವಿದ್ದಲ್ಲಿ ಮಾತ್ರ ಭಾಗವಹಿಸಲು ಕೋರಿದೆ. ಈ ಸುತ್ತಿನಲ್ಲಿ ಸೀಟು ಹಂಚಿಕೆಯಾದಲ್ಲಿ, ಮೊದಲು ಪ್ರವೇಶ ಪಡೆದಿದ್ದ ಕಾಲೇಜಿನ ಸೀಟು ತಂತಾನೆ ರದ್ದುಗೊಳ್ಳುತ್ತದೆ ಮತ್ತು ಯಾವುದೇ ಕಾರಣಕ್ಕೂ ಪ್ರಸ್ತುತ ವ್ಯಾಸಂಗ ಮಾಡುತ್ತಿರುವ ಕಾಲೇಜಿನಲ್ಲಿ **ಮುಂದುವರಿಯಲು ಸಾಧ್ಯವಾಗುವುದಿಲ್ಲ** ಅಂತಹ ಅಭ್ಯರ್ಥಿಗಳು ಈ ಸುತ್ತಿನಲ್ಲಿ ಹಂಚಿಕೆಯಾಗುವ ಕಾಲೇಜಿನಲ್ಲಿ ನಿಗದಿತ ದಿನಾಂಕದೊಳಗೆ ಪ್ರವೇಶವನ್ನು ಪಡೆಯಲೇಬೇಕು. ಒಂದು ವೇಳೆ ಈ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗೆ ಪ್ರವೇಶ ಪಡೆಯದಿದ್ದಲ್ಲಿ ಅಭ್ಯರ್ಥಿಯು ಎರಡೂ ಕಡೆ ಸೀಟು ಕಳೆದು ಕೊಳ್ಳುತ್ತಾನೆ ಯಾವುದೇ ಸೀಟನ್ನು ಹೊಂದಿರುವುದಿಲ್ಲ ಹಾಗು ಯಾವುದೇ ಫೀ ಮರು ಪಾವತಿ ಮಾಡುವುದಿಲ್ಲ. ಈ ಸುತ್ತಿನಲ್ಲಿ ಹಂಚಿಕೆಯಾದ ನಂತರ ಕಡ್ಡಾಯವಾಗಿ ಕಾಲೇಜಿಗೆ ಪ್ರವೇಶ ಪಡೆಯಬೇಕು.

ಈ ಕೆಳಗಿನ ವರ್ಗಗಳಲ್ಲಿನ ಅಭ್ಯರ್ಥಿಗಳು ಈ ಸುತ್ತಿನಲ್ಲಿ ಭಾಗವಹಿಸಲು ಅರ್ಹರಿರುವುದಿಲ್ಲ.

1. ವೈದ್ಯಕೀಯ ಸೀಟನ್ನು ಒಮ್ಮೆ ಹಂಚಿಕೆ ಮಾಡಿಕೊಂಡವರು.
2. ದಂತವೈದ್ಯಕೀಯ ಕಾಲೇಜಿಗೆ ಪ್ರವೇಶ ಪಡೆದವರು.
3. ವೆಟರಿನರಿ ಸೀಟನ್ನು ಒಮ್ಮೆ ಹಂಚಿಕೆ ಮಾಡಿಕೊಂಡವರು.
4. ಇಂಜಿನಿಯರಿಂಗ್ ಕಾಲೇಜಿಗೆ ಪ್ರವೇಶ ಪಡೆದವರು.
5. **ಆಯುಷ್** / **ಫಾರ್ಮ ಸೈನ್ಸ್** ಕೋರ್ಸುಗಳ ಸೀಟುಗಳನ್ನು ರದ್ದುಪಡಿಸಿಕೊಂಡವರು
6. **ಆಯುಷ್** / **ಫಾರ್ಮ ಸೈನ್ಸ್** ಕೋರ್ಸುಗಳಿಗೆ ಹಂಚಿಕೆಯಾದ ಸೀಟುಗಳಿಗೆ ನಿಗದಿತ ಶುಲ್ಕವನ್ನು ಪಾವತಿಸದೇ ಇರುವವರು.

ಸಹಿ/-

ಕಾರ್ಯನಿರ್ವಾಹಕ ನಿರ್ದೇಶಕರ ಪರವಾಗಿ.